APPLICATION FOR THE RECRUITMENT OF VILLAGE ACCOUNTANT CHITRADURGA

| | | | | |
|---|---|---|---|---|
| Application Number<br>*(for office use)* | | | | Affix your latest Colour Passport Photograph here |
| Full Name of the Applicant/<br>ಅಭ್ಯರ್ಥಿಯ ಪೂರ್ಣ ಹೆಸರು<br>(as per SSLC Marks Card) | | | | |
| Name of the Father/<br>ತಂದೆಯ ಹೆಸರು(as per SSLC Marks Card) | | | | |
| Date of Birth/ಜನ್ಮ ದಿನಾಂಕ(dd/mm/yyyy)<br>(as per SSLC Marks Card) | --- --- | | | |
| Address in Full/<br>ಪೂರ್ಣ ವಿಳಾಸ | | | | |
| | District/ಜಿಲ್ಲೆ | Pin Code | | |
| Telephone/Mobile No | STD:_______ Tel.No:__________Mob.No________________ | | | |
| Sex/ಲಿಂಗ | Male/ಪುರುಷ | | Female/ಮಹಿಳೆ | |
| Qualification Details/ವಿದ್ಯಾರ್ಹತೆ ವಿವರ(attach proof) (*Tick appropriate Box)* | | | | |
| Qualification/<br>ವಿದ್ಯಾರ್ಹತೆ<br>(*Tick appropriate Box)* | PUC/<br>ಪಿ.ಯು.ಸಿ | | CBSE/ICSE<br>ಸಿ.ಬಿ.ಎಸ್.ಇ/ಐ.ಸಿ.ಎಸ್.ಇ | |
| | Total Marks/<br>ಒಟ್ಟು ಅಂಕ | | Marks obtained/<br>ಗಳಿಸಿದ ಅಂಕ | |
| CATEGORY DETAILS/ಜಾತಿ ವಿವರ[ (attach proof) (*Tick appropriate Box)*] | | | | |
| GENERAL<br>ಸಾಮಾನ್ಯ | CATEGORY -1<br>ಪ್ರವರ್ಗ -1 | | CATEGORY-2A<br>ಪ್ರವರ್ಗ -2ಎ | |
| CATEGORY-2B<br>ಪ್ರವರ್ಗ -2ಬಿ | CATEGORY-3A<br>ಪ್ರವರ್ಗ -3ಎ | | CATEGORY-3B<br>ಪ್ರವರ್ಗ -3ಬಿ | |
| Schedule Caste<br>ಪರಿಶಿಷ್ಟ ಜಾತಿ | Schedule Tribe<br>ಪರಿಶಿಷ್ಟ ವರ್ಗ | | | |
| Reservation Claimed under/ ಗುಂಪು ವಿವರ (*Tick appropriate Box/Boxes)*(attach proof) | | | | |
| RURAL<br>ಗ್ರಾಮೀಣ | KANNADA MEDIUM<br>ಕನ್ನಡ ಮಾಧ್ಯಮ | | PROJECT DISPLACED PERSON<br>(Yojane Nirashrita)<br>ಯೋಜನೆ ನಿರಾಶ್ರಿತರು | |
| PHYSICALLY HANDICAP<br>ಅಂಗವಿಕಲ | Ex-SERVICEMAN<br>ಮಾಜಿ ಸೈನಿಕ | | General<br>ಸಾಮಾನ್ಯ | |
| Age Relaxation/ವಯೋಮಿತಿ ರಿಯಾಯಿತಿ(*Tick appropriate Box/Boxes)*(attach proof) | | | | |
| Widow<br>ವಿಧವೆ | PHC<br>ಅಂಗವಿಕಲ | | Ex-Serviceman<br>ಮಾಜಿ ಸೈನಿಕ | |
| D.D. PARTICULARS/ಡಿ.ಡಿ.ವಿವರ | | | | |
| Name of the Bank/ಬ್ಯಾಂಕಿನ ಹೆಸರು | D.D.No/ಡಿ.ಡಿ.ನಂ<br>(Six Digit) | D.D.Date/ಡಿ.ಡಿ.ದಿನಾಂಕ<br>(dd/mm/yy) | Amount/ಮೊತ್ತ | |
| | | | | |

The above information is correct to the best of my best knowledge/ಮೇಲ್ಕಂಡ ಅಂಶಗಳು ಸತ್ಯವಾಗಿರುತ್ತವೆಂದು ಪ್ರಮಾಣೀಕರಿಸುತ್ತೇನೆ.

Signature of the Applicant/ಅಭ್ಯರ್ಥಿಯ ಸಹಿ:

## ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಂ:ಗ್ರಾಲೆ:ಸಿಬ್ಬಂದಿ:ಸಿಆರ್–40/09–10 ದಿನಾಂಕ:23–9–2009.

### ::ಅಧಿಸೂಚನೆ::

**ವಿಷಯ:** ಚಿತ್ರದುರ್ಗ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂ:ಕಂಇ–299 ಬಿಎಸ್‌ಸಿ 2006 ದಿನಾಂಕ:8–9–2009.

%%%%%%

ಚಿತ್ರದುರ್ಗ ಕಂದಾಯ ಇಲಾಖಾ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಎಲ್ಲಾ ವಿವರಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ, ಚಿತ್ರದುರ್ಗ ಜಿಲ್ಲೆ ಇವರಿಗೆ ದಿ:26–9–2009 ರಿಂದ ದಿ:30–10–2009ರ ಸಂಜೆ 5–00 ಗಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ ಅಥವಾ ಕೋರಿಯರ್ ಮೂಲಕ ಕಳುಹಿಸುವುದು.

ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಮಾತ್ರ ಅಧಿಕಾರವಿರುತ್ತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

**ಹುದ್ದೆಗಳ ವಿವರ:**

| ಕ್ರ.ಸಂ: | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಗ್ರಾಮಲೆಕ್ಕಿಗ | 60 | ಪಿ.ಯು.ಸಿ. ಅಥವಾ ಸಿಬಿಎಸ್‌ಇ/ಐಸಿಎಸ್‌ಇ (12ನೇ ತರಗತಿ) | 5800–100:6000–125:6500–150:7100–175:7800–200: 8600–225:9500–250: 10500 |

**ಮೀಸಲಾತಿ ವರ್ಗೀಕರಣ:**

| ಕ್ರ. ಸಂ: | ಮೀಸಲಾತಿ | ಇತರೆ | ಕನ್ನಡ ಮಾಧ್ಯಮ | ಮಹಿಳೆ | ಯೋಜನಾ ನಿರಾಶ್ರಿತರು | ಗ್ರಾಮೀಣ | ಮಾಜಿ ಸೈನಿಕರು | ಅಂಗವಿಕಲ | ಒಟ್ಟು |
|---|---|---|---|---|---|---|---|---|---|
| **1** | **2** | **3** | **4** | **5** | **6** | **7** | **8** | **9** | **10** |
| 1 | ಪ.ಜಾತಿ | 4 | – | 1 | – | 5 | – | – | 10 |
| 2 | ಪ.ಪಂ | 1 | – | – | – | 1 | – | – | 2 |
| 3 | ಪ್ರ.ವ–1 | 1 | – | 1 | 1 | – | – | – | 3 |
| 4 | ಪ್ರವ–2(ಎ) | 3 | – | 3 | 1 | 2 | – | – | 9 |
| 5 | ಪ್ರವ–2(ಬಿ) | 1 | – | 1 | – | – | – | – | 2 |
| 6 | ಪ್ರವ–3(ಎ) | 1 | – | – | 1 | – | – | – | 2 |
| 7 | ಪ್ರವ–3(ಬಿ) | 1 | – | – | – | 1 | – | – | 2 |
| 8 | ಸಾಮಾನ್ಯ | – | 3 | 12 | – | 6 | 6 | 3 | 30 |
| | ಒಟ್ಟು | **12** | **3** | **18** | **3** | **15** | **6** | **3** | **60** |

**ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:**

1) ಅರ್ಜಿಗಳನ್ನು ಅಂಚೆ ಅಥವಾ ಕೋರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು.
2) **ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು
   ಅ) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.
   ಆ) **ಗರಿಷ್ಠ ವಯೋಮಿತಿ:**

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ. 3ಎ, 3ಬಿ | 38 ವರ್ಷ |
| ಪ.ಜಾತಿ/ಪ.ಪಂಗಡ ಪ್ರ–1 | 40 ವರ್ಷ |
| ವಿಧವೆಯರು/ಅಂಗವಿಕಲ | ಚಾಲ್ತಿಯಲ್ಲಿ ನಿಗದಿಪಡಿಸಿರುವ ವಯೋಮಿತಿಗೆ 10 ವರ್ಷ ಹೆಚ್ಚಿಗೆ ಸೇರಿಸಿಕೊಳ್ಳಲಾಗುವುದು. |

3) ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
4) ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯ ವೆಬ್‌ಸೈಟ್ http://chitradurga.nic.in ನಿಂದ ಡೌನ್‌ಲೋಡ್ ಮಾಡಿಕೊಳುವುದು, ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯಿಂದ ಒದಗಿಸಲಾಗುವುದಿಲ್ಲ. ಲಕೋಟೆಯ ಮೇಲೆ ಹುದ್ದೆಯ ಹೆಸರನ್ನು ನಮೂದಿಸುವುದು.
5) ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ಇಲಾಖಾ ಮುಖ್ಯಸ್ಥರ ಮೂಲಕ ಸಲ್ಲಿಸುವುದು.
6) ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
7) ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.
8) ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
9) ಜಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಾತಿ ಮತ್ತು ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
10) ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಚಿತ್ರದುರ್ಗರವರು ಕಾಯ್ದಿರಿಸಿಕೊಂಡಿರುತ್ತಾರೆ.
11) **ಅರ್ಜಿ ಶುಲ್ಕದ ವಿವರ:** ಪ.ಜಾತಿ/ಪ. ಪಂಗಡ, ಪ್ರವರ್ಗ–1 ಅಭ್ಯರ್ಥಿಗಳು ರೂ.50–00 ಹಾಗೂ ಇತರರಿಗೆ ರೂ.100–00 ಗಳ ಡಿ.ಡಿ.ಯನ್ನು ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ ಇವರ ಹೆಸರಿಗೆ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಮಾತ್ರ ಪಡೆದು, ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಹಾಗೂ ಡಿ.ಡಿ. ಹಿಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು. ಇತರೆ ಸ್ಥಳೀಯ ಬ್ಯಾಂಕುಗಳಿಂದ ಪಡೆದ ಡಿಡಿ ಲಗತ್ತಿಸಿದ ಅರ್ಜಿಯನ್ನು ಹಾಗೂ ಡಿ.ಡಿ.ಯನ್ನು ಲಗತ್ತಿಸದ ಅರ್ಜಿಯನ್ನು ತಿರಸ್ಕರಿಸಲಾಗುವುದು.
12) ಸಹಿ ಮಾಡದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
13) ಆಯ್ಕೆಯನ್ನು ಅಭ್ಯರ್ಥಿಯ **ಮೆರಿಟ್ ಆಧಾರದ** ಮೇಲೆ ಮಾತ್ರ ಪರಿಗಣಿಸಲಾಗುವುದು.
14) ಅಂಚೆ ವಿಳಂಬಕ್ಕೆ ಜಿಲ್ಲಾಧಿಕಾರಿಗಳ ಕಛೇರಿಯು ಜವಾಬ್ದಾರರಾಗುವುದಿಲ್ಲ.
15) **ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳ ಪ್ರತಿಗಳನ್ನು ಅರ್ಜಿ ಸಲ್ಲಿಸುವ ದಿನಾಂಕದಂದು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ ಪಡೆದು ಲಗತ್ತಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆ ಅಡಿಯಲ್ಲಿ ಪರಿಗಣಿಸಲಾಗುವುದು.

| | |
|---|---|
| **ಪ.ಜಾತಿ/ಪ. ಪಂಗಡ, ಪ್ರವರ್ಗ-1** | ಸರ್ಕಾರದ ಅಧಿಸೂಚನೆ ಸಂ:SWD 132 SAD 97 ದಿ:8-2-2000 ಕ್ರಮವಾಗಿ ನಮೂನೆ-1 ಮತ್ತು 2 |
| **ಪ್ರವರ್ಗ-2ಎ, 2ಬಿ, 3ಎ, 3ಬಿ** | ಸರ್ಕಾರದ ಅಧಿಸೂಚನೆ ಸಂ:SWD 126 BCA ದಿ:13-2-2003 (ಕರ್ನಾಟಕ ಅನುಸೂಚಿತ ಜಾತಿ, ಅನುಸೂಚಿತ ಬುಡಕಟ್ಟುಗಳು ಮತ್ತು ಹಿಂದುಳಿದ ವರ್ಗಗಳ ನೇಮಕಾತಿ ಮುಂತಾದ ಮೀಸಲಾತಿ ತಿದ್ದುಪಡಿ) ನಿಯಮಗಳು 2000ರನ್ವಯ ನಮೂನೆ-3 |

ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರಬೇಕು.

**16) ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:**

ಸರ್ಕಾರಿ ಆದೇಶ ಸಂ:ಸಿಆಸುಇ-71:ಸೇನೇನಿ-2001 ದಿ:24-10-2002ರನ್ವಯ ಶೇಕಡ 5ರಷ್ಟು ಹುದ್ದೆಗಳನ್ನು ಯೋಜನಾ ನಿರಾಶ್ರಿತರ ಗುಂಪಿಗೆ ಮೀಸಲಿಡಲಾಗಿದೆ. ಈ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರು ನೀಡಿದ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು.

**17) ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:**

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟದ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು

**18) ಅಂಗವಿಕಲ ಅಭ್ಯರ್ಥಿಗಳು:**

(ಎ) (ಅ) ಕಣ್ಣಿನ ದೃಷ್ಟಿಯನ್ನು ಸರಿಪಡಿಸುವ ಕನ್ನಡಕವನ್ನು ಹಾಕಿದಾಗ 2 ಕಣ್ಣಿನ ಪೈಕಿ ಉತ್ತಮವಾದ ಕಣ್ಣಿನಲ್ಲಿ 6.60 ಅಥವಾ 20:2000(ಸ್ನೆಲರ್) ಅನ್ನು ಮೀರದಿರುವ ದೃಷ್ಟಿ ಸಾಮರ್ಥ್ಯ ಇರುವ ವ್ಯಕ್ತಿ

(ಆ) 20 ಡಿಗ್ರಿಗಳು ಅಥವಾ ಅದಕ್ಕೂ ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಟಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ

(ಇ) ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿರುವವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

(ಬಿ) ಎಲ್ಲ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು ಕೇಳಿಸುವ ಅಥವಾ ಅರ್ಥವಾಗದ ಅಥವಾ ಎರಡೂ ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್‌ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯ) ಅಥವಾ ಎರಡೂ ಕಿವಿಗಳು ಶ್ರವಣ ಶಕಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರೀಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಸಿ) ಮೂಳೆಗಳು, ಮಾಂಸ ಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯ ನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

(ಡಿ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿರುವರಾಗಿರುತ್ತಾರೆ.

(ಇ) ಧೈಹಿಕ ಅಂಗವಿಕಲತೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಆರ್ಥೋಪೆಡಿಕ್ ಸರ್ಜನ್) ರಿಂದ ಧೈಹಿಕ ಅಂಗವಿಕಲತೆಯ ಮೌಲೀಕರಣವನ್ನು ಅಲ್ಮಕೋ ಕಾನ್‌ಪುರ್ (ಡಬ್ಲ್ಯೂ.ಎಚ್.ಒ.ಸ್ಟ್ಯಾಂಡರ್ಡ್) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರಿ ಆದೇಶ ಸಂ.ಡಿಪಿಎಆರ್ 07 ಸೇಸೇಅ 94. ದಿನಾಂಕ:13-9-95 ರಲ್ಲಿ ನಿಗಧಿಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಶೇ.40 ರಿಂದ 75 ಕ್ಕಿಂತ ಹೆಚ್ಚಾಗಿರಬಾರದು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗಧಿಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದುಕೊಂಡಿರಬೇಕು.

19. <u>ಗ್ರಾಮೀಣ ಅಭ್ಯರ್ಥಿಗಳು:</u>

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಡೀಕೃತ ಗ್ರಾಮೀಣ ಪತ್ರವನ್ನು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದು ಅದರ ಒಂದೊಂದು ಫೋಟೋ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವ್ನು ನಮೂನೆ-2 ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಅಜಿಯೊಂದಿಗೆ ಲಗತ್ತಿಸತಕ್ಕದ್ದು.

**20. <u>ಕನ್ನಡ ಮಾಧ್ಯಮ ಅಭ್ಯರ್ಥಿಗಳು:</u>**

ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್ 71 ಎಸ್‌ಆರ್‌ಆರ್ 2001. ದಿ:24-10-02 ರಲ್ಲಿ ಹೊರಡಿಸಿದ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು

1977 ರ ನಿಯಮ (9) (1)(ಸಿ) ರನ್ವಯ ಅಭ್ಯರ್ಥಿಯು 1 ರಿಂದ 10ನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಧ್ಯಾಯರ ಸಹಿ ಹಾಗೂ ಮೊಹರು ಮತ್ತು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಪಡೆದ ಪ್ರಮಾಣ ಪತ್ರದ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

**21. <u>ಅರ್ಹತಾ ಷರತ್ತುಗಳು:</u>**

(ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ಧೈಹಿಕವಾಗಿ ಆರೋಗ್ಯವಂತರಾಗಿರಬೇಕು.ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.**

**22. ಈ ಕೆಳಕಂಡ ದಾಖಲೆಗಳನ್ನು ನಿಗದಿತ ನಮೂನೆಯ ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂಬುದಾಗಿ ಅಭ್ಯರ್ಥಿಗಳು ಖಚಿತಪಡಿಸಿಕೊಳ್ಳುವುದು**

* ಹುದ್ದೆಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ/ಪ್ರಮಾಣ ಪತ್ರ
* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ವರ್ಗಾವಣೆ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Commulative Record)
* ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಯ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
* ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ

**ಮೇಲ್ಕಂಡಂತೆ ನಿಗದಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**23. <u>ಇತರೆ ಸೂಚನೆಗಳು:</u>**

(1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ (ಜೆರಾಕ್ಸ್) ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

(2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ದಿನ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

**(ಅಮ್ಲಾನ್ ಆದಿತ್ಯ ಬಿಸ್ವಾಸ್)**
**ಜಿಲ್ಲಾಧಿಕಾರಿಗಳು,**
**ಚಿತ್ರದುರ್ಗ ಜಿಲ್ಲೆ.**

ಸಿ.

ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಂ:ಗ್ರಾಲೆ:ಸಿಬ್ಬಂದಿ:ಸಿಆರ್-40/09-10 ದಿನಾಂಕ:23-9-2009.

**:: ಸಂಕ್ಷಿಪ್ತ ಅಧಿಸೂಚನೆ::**

**ವಿಷಯ:** ಚಿತ್ರದುರ್ಗ ಜಿಲ್ಲೆಯಲ್ಲಿ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:** 1) ಸರ್ಕಾರದ ಅಧಿಸೂಚನೆ ಸಂ:ಕಂಇ-299 ಬಿಎಸ್‌ಸಿ 2006 ದಿನಾಂಕ:8-9-2009.
2) ಈ ಪ್ರಾಧಿಕಾರದ ಸಮಸಂಖ್ಯೆ ಅಧಿಸೂಚನೆ ದಿ:23-9-09.

%%%%%%%%

ಚಿತ್ರದುರ್ಗ ಜಿಲ್ಲೆಯಲ್ಲಿ ಖಾಲಿ ಇರುವ 60 ಗ್ರಾಮಲೆಕ್ಕಿಗರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪಿ.ಯು.ಸಿ/ಸಿಬಿಎಸ್‌ಇ/ಐಸಿಎಸ್‌ಇ (12ನೇ ತರಗತಿ) ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಜಿಲ್ಲಾಧಿಕಾರಿಗಳು. ಚಿತ್ರದುರ್ಗ ರವರ ವೆಬ್‌ಸೈಟ್ http://chitradurga.nic.in ನಲ್ಲಿ ಲಭ್ಯವಿದ್ದು, ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಅರ್ಜಿಯಲ್ಲಿರುವ ಎಲ್ಲಾ ಕಾಲಂಗಳನ್ನು ಭರ್ತಿ ಮಾಡಿ ಅವಶ್ಯಕ ದಾಖಲೆಗಳೊಂದಿಗೆ ದಿ:26-9-2009 ರಿಂದ ದಿ:30-10-2009ರ ಸಂಜೆ 5.00 ಗಂಟೆಯೊಳಗಾಗಿ, ಅಧ್ಯಕ್ಷರು, ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಚಿತ್ರದುರ್ಗರವರ ವಿಳಾಸಕ್ಕೆ ಅಂಚೆ/ಕೊರಿಯರ್ ಮೂಲಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದಿ:23-9-2009ರ ಅಧಿಸೂಚನೆಯನ್ನು ಜಿಲ್ಲಾಧಿಕಾರಿಗಳು, ಉಪವಿಭಾಗಾಧಿಕಾರಿಗಳು, ಜಿಲ್ಲೆಯ ಎಲ್ಲಾ ತಹಶೀಲ್ದಾರ್ ಕಛೇರಿಗಳ ನೋಟೀಸ್ ಬೋರ್ಡ್‌ನಲ್ಲಿ ಹಾಗೂ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದ್ದು, ನೋಡಬಹುದಾಗಿದೆ.

**(ಅಮ್ಲಾನ್ ಆದಿತ್ಯ ಬಿಸ್ವಾಸ್)**
**ಜಿಲ್ಲಾಧಿಕಾರಿಗಳು,**
**ಚಿತ್ರದುರ್ಗ ಜಿಲ್ಲೆ.**